# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 555

2) ಮಾನ್ಯ ಸದಸ್ಯರ ಹೆಸರು : ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

3) ಉತ್ತರಿಸುವ ದಿನಾಂಕ : 14/08/2025

4) ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕೋಮು ಹಿಂಸಾಚಾರವನ್ನು ನಿಗ್ರಹಿಸಲು ಎಸ್.ಎ.ಎಫ್ (Special Action Force) ಸ್ಥಾಪಿಸಲಾಗಿದೆಯೆ: ಯಾವೆಲ್ಲ ಜಿಲ್ಲೆಗಳಲ್ಲಿ ಈ ಪಡೆ ಕಾರ್ಯ ವ್ಯಾಪ್ತಿಯನ್ನು ಹೊಂದಿದೆ: ಯಾವ ರೀತಿಯಾಗಿ ಈ ಫೋರ್ಸ್ ಕಾರ್ಯ ನಿರ್ವಹಿಸಲಿದೆ: (ಸಂಪೂರ್ಣ ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ 83 ಪಿಓಪಿ 2025, ದಿನಾಂಕ: 28/05/2025 ಮತ್ತು 11/06/2025ರಲ್ಲಿ ಉಡುಪಿ, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡ (ಮಂಗಳೂರು) ಜಿಲ್ಲೆಗಳಲ್ಲಿ ಕೋಮು ಗಲಭೆಗಳನ್ನು ನಿಗ್ರಹಿಸಲು ಹೊಸದಾಗಿ ವಿಶೇಷ ಕಾರ್ಯಪಡೆಯನ್ನು ಸ್ಥಾಪಿಸಲಾಗಿರುತ್ತದೆ.<br><br>**ವಿಶೇಷ ಕಾರ್ಯಪಡೆಯ ಕಾರ್ಯಗಳು:**<br><br>1. ದ್ವೇಷ ಭಾಷಣ, ಉದ್ರೇಕಕಾರಿ ಘಟನೆಗಳು ಮತ್ತು ಕೋಮು ಸಂಬಂಧಿತ ಘಟನೆಗಳಿಗಾಗಿ ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮಗಳನ್ನು ಬಳಸುವವರ ಮೇಲೆ ನಿಗಾ ಇಡುವುದು.<br>2. ಸಂಭಾವ್ಯ ಕೋಮು ಹಿಂಸಾಚಾರದ ಬಗ್ಗೆ ಕಣ್ಗಾವಲು ಮತ್ತು ಮಾನವ ಗುಪ್ತಚರ ಮೂಲಕ ಎಚ್ಚರಿಕೆ ವ್ಯವಸ್ಥೆಯನ್ನು ರಚಿಸುವುದು.<br>3. ಪ್ರಾಬಲ್ಯದ ಮೂಲಕ ವಿಶ್ವಾಸ ವೃದ್ಧಿ ಕ್ರಮಗಳನ್ನು ಕೈಗೊಳ್ಳುವುದು.<br>4. ಮೂಲಭೂತೀಕರಣವನ್ನು ಗುರುತಿಸಲು ಮತ್ತು ಮೇಲ್ವಿಚಾರಣೆ ಮಾಡಲು ಕ್ರಮಗಳನ್ನು ಕೈಗೊಳ್ಳುವುದು.<br>5. ಕೋಮು ಗಲಭೆಯ ಸಂದರ್ಭದಲ್ಲಿ ವಿಶೇಷ ಕಾರ್ಯಪಡೆ ಅಧಿಕಾರಿ/ಸಿಬ್ಬಂದಿಗಳು ಅದನ್ನು ನೇರವಾಗಿ ನಿಯಂತ್ರಿಸುವುದು. |
| ಆ) | ಈವರೆಗೆ ಎಸ್.ಎ.ಎಫ್. ಎಷ್ಟು ಕೇಸ್‌ಗಳನ್ನು ರಿಜಿಸ್ಟರ್ ಮಾಡಿದೆ: (ವಿವರ ನೀಡುವುದು) | ಈವರೆಗೆ ಎಸ್.ಎ.ಎಫ್. ಯಾವುದೇ ಕೇಸ್‌ಗಳನ್ನು ರಿಜಿಸ್ಟರ್ ಮಾಡಿರುವುದಿಲ್ಲ. |

| | | |
|---|---|---|
| ಇ) | ರಾಜ್ಯದಲ್ಲಿ ಮತಾಂತರ ಸಂಬಂಧಿಸಿದಂತೆ ಅನೇಕ ಕಡೆಗಳಲ್ಲಿ ಕೋಮು ಗಲಭೆಗಳು ನಡೆದಿವೆ ಆದ್ದರಿಂದ ಮತಾಂತರ ವಿಚಾರಗಳ ಬಗ್ಗೆ ಈ ಎಸ್.ಎ.ಎಫ್. ನಿಗಾ ವಹಿಸುವುದೇ: | ಉಡುಪಿ, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಯಾವುದೇ ಕಾರಣಕ್ಕೆ ಕೋಮು ಗಲಭೆಗಳು ನಡೆದಲ್ಲಿ ವಿಶೇಷ ಪಡೆಯು (ಎಸ್.ಎ.ಎಫ್) ಅದನ್ನು ತಡೆಯಲು ನಿಗಾವಹಿಸುವುದು. |
| ಈ) | ಗೋ ಹತ್ಯೆ ಮತ್ತು ಗೋ ಕಳ್ಳತನಗಳಿಂದ ಅನೇಕ ಕೋಮು ಹಿಂಸಾಚಾರಗಳು ರಾಜ್ಯದಲ್ಲಿ ನಡೆದಿರುವುದರಿಂದ ಈ ಬಗ್ಗೆ ಎಸ್.ಎ.ಎಫ್. ನಿಗಾ ವಹಿಸುವುದೇ? | |

**ಸಂಖ್ಯೆ: ಹೆಚ್‌ಡಿ 152 ಪಿಓಪಿ 2025**

**(ಡಾ|| ಜಿ.ಪರಮೇಶ್ವರ)**
ಗೃಹ ಸಚಿವರು.